# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 631

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ.ಎಲ್ ಅನಿಲ್ ಕುಮಾರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 22.09.2022

ಉತ್ತರಿಸುವ ಸಚಿವರು : ಮುಖ್ಯಮಂತ್ರಿ.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr>
<td>ಅ</td>
<td>ಅನ್ನಭಾಗ್ಯ ಯೋಜನೆಯ ಅಡಿಯಲ್ಲಿ ನೀಡುವ ಪಡಿತರವನ್ನು ಅಕ್ರಮವಾಗಿ ಮಾರಾಟ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ; ಸರ್ಕಾರಿ ಯೋಜನೆಯಡಿ ವಿತರಿಸುವ ಪಡಿತರವನ್ನು ಅಕ್ರಮವಾಗಿ ಮಾರಾಟ ಮಾಡುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)</td>
<td>ಬಂದಿರುತ್ತದೆ.<br>ಕಳೆದ ಮೂರು ವರ್ಷಗಳಲ್ಲಿ ಒಟ್ಟು 834 ಪ್ರಕರಣಗಳು ದಾಖಲಾಗಿರುತ್ತವೆ.
<table>
<tr><th>ವರ್ಷಗಳು</th><th>ದಾಖಲಿಸಲಾದ ಪ್ರಕರಣಗಳು</th></tr>
<tr><td>2020-21</td><td>65</td></tr>
<tr><td>2021-22</td><td>472</td></tr>
<tr><td>2022-23</td><td>297</td></tr>
<tr><td>ಒಟ್ಟು</td><td>834</td></tr>
</table>
ಅಕ್ರಮ ದಾಸ್ತಾನು ಮತ್ತು ಕಾಳಸಂತೆ ವಹಿವಾಟುಗಳು ನಡೆಯುವುದನ್ನು ತಡೆಗಟ್ಟಿ ನಿರ್ದಿಷ್ಟ ಫಲಾನುಭವಿಗಳಿಗೆ ಪಡಿತರ ಆಹಾರ ಧಾನ್ಯಗಳು ತಲುಪುವುದನ್ನು ಖಾತರಿ ಪಡಿಸಿಕೊಳ್ಳಲು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅಗತ್ಯ ವಸ್ತುಗಳ ಕಾಯ್ದೆ 1955 ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರ ಅಡಿಯಲ್ಲಿ ಹೊರಡಿಸಿರುವ ಆದೇಶಗಳಡಿಯಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಲಾಗಿದೆ. ಅಕ್ರಮ ತಡೆಯಲು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಜೊತೆಗೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಲ್ಲಿ ಇಲಾಖೆ ಅಧಿಕಾರಿಗಳನ್ನೊಳಗೊಂಡ "ರಾಜ್ಯ ಮಟ್ಟದ ಆಹಾರ ಜಾಗೃತಿ ಮತ್ತು ತನಿಖಾ ದಳ" ವನ್ನು ರಚಿಸಲಾಗಿದೆ. ಇದರೊಂದಿಗೆ ಅಗತ್ಯ ವಸ್ತುಗಳ ಕಾಯ್ದೆ 1955 ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರ ಅಡಿಯಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಲಾಗಿದೆ. ಅಕ್ರಮ ತಡೆಯಲು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಜೊತೆಗೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಲ್ಲಿ ಇಲಾಖೆ ಅಧಿಕಾರಿಗಳನ್ನೊಳಗೊಂಡ "ರಾಜ್ಯ ಮಟ್ಟದ ಆಹಾರ ಜಾಗೃತಿ ಮತ್ತು ತನಿಖಾ ದಳ" ವನ್ನು ರಚಿಸಲಾಗಿದೆ.</td>
</tr>
</table>

| | | |
|---|---|---|
| ಆ | ಈ ಪ್ರಕರಣಗಳಲ್ಲಿ ಸರ್ಕಾರಕ್ಕೆ ಉಂಟಾಗಿರುವ ನಷ್ಟದ ಪ್ರಮಾಣವೆಷ್ಟು; ಈ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ? (ಕೈಗೊಂಡಿದ್ದಲ್ಲಿ, ಪ್ರಕರಣವಾರು ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ 76,249.14 ಕ್ವಿಂಟಾಲ್ ಅಕ್ಕಿ, 8,591.58 ಕ್ವಿಂಟಾಲ್ ಜೋಳ, 1284.86 ಕ್ವಿಂಟಾಲ್ ಗೋಧಿ, 18,444.90 ಕ್ವಿಂಟಾಲ್ ರಾಗಿಯನ್ನು ವಶಪಡಿಸಿಕೊಂಡಿದ್ದು ಇದರ ಅಂದಾಜು ಮೌಲ್ಯ ರೂ. 26,98,78,563 ಆಗಿರುತ್ತದೆ. ಪಡಿತರ ಅಕ್ರಮದಲ್ಲಿ ಪಾಲ್ಗೊಂಡ ಆರೋಪಿತರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ. ಹಾಗೂ ಪ್ರಕರಣದಲ್ಲಿ ವಶಪಡಿಸಿಕೊಂಡ ಅಗತ್ಯ ವಸ್ತುಗಳನ್ನು ಜಪ್ತಿ ಮಾಡಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುತ್ತಿದೆ. |

ಆನಾಸ 152 ಆರ್‌ಪಿಆರ್ 2022 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ